ಕೊರಟಗೆರೆ ತಾಲ್ಲೂಕಿನ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ರಸ್ತೆ ಅಭಿವೃದ್ಧಿ

693 (825) ಶ್ರೀ ಚನ್ನಿಗಪ್ಪ ಸಿ.(ಕೊರಟಗೆರೆ): ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ತುಮಕೂರು ಜಿಲ್ಲೆ ಕೊರಟಗೆರೆ ತಾಲ್ಲೂಕಿನಲ್ಲಿ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ರಸ್ತೆಗಳು ಹದಗೆಟ್ಟಿದ್ದು, ಸಂಚಾರಕ್ಕೆ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಈ ಹದಗೆಟ್ಟ ರಸ್ತೆಗಳ ದುರಸ್ತಿಗೆ ಈವರೆಗೆ ಸರ್ಕಾರವು ವ್ಯಯ ಮಾಡಿರುವ ಹಣವೆಷ್ಟು?

2. ತೀವ್ರ ಹದಗೆಟ್ಟಿರುವ ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಸರ್ಕಾರವು ಕೈಗೊಳ್ಳುವ ಕ್ರಮವೇನು?

3. ಈ ಹದಗೆಟ್ಟ ರಸ್ತೆಗಳನ್ನು ಅಭಿವೃದ್ಧಿಪಡಿಸಿ ಉತ್ತಮ ರಸ್ತೆಯನ್ನಾಗಿ ಮಾರ್ಪಡಿಸಿ ನಾಗರೀಕರ ಸಂಚಾರಕ್ಕೆ ಅನಾನುಕೂಲ ಕಲ್ಪಿಸಿಕೊಡುವುದು ಯಾವಾಗ?

ಶ್ರೀ ಎಂ.ವೈ.ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು):-

1. ತುಮಕೂರು ಜಿಲ್ಲೆ ಕೊರಟಗೆರೆ ತಾಲ್ಲೂಕಿನಲ್ಲಿ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ರಸ್ತೆಗಳು, ಹದಗೆಟ್ಟಿದ್ದು, ಸಂಚಾರಕ್ಕೆ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಜಿಲ್ಲಾ ಪಂಚಾಯತ್ ವ್ಯಾಪ್ತಿಯ ರಸ್ತೆಗಳ ದುರಸ್ತಿಗಾಗಿ ಪ್ರಸಕ್ತ ಸಾಲಿನಲ್ಲಿ ಜನವರಿ 2001ರ ಅಂತ್ಯದವರೆಗೆ ಯೋಜನೇತರ ಶೀರ್ಷಿಕೆಯಡಿಯಲ್ಲಿ ರೂ.6.69 ಲಕ್ಷ ರೂ.ಗಳನ್ನು ಖರ್ಚು ಮಾಡಲಾಗಿದೆ.

2. ಪ್ರಸಕ್ತ ಸಾಲಿನ ಬಾರಿ ಮಳೆಯಿಂದ ಹದಗೆಟ್ಟಿರುವ ಬಹಳಷ್ಟು ರಸ್ತೆಗಳನ್ನು ಯೋಜನೇತರ ಲೆಕ್ಕ ಶೀರ್ಷಿಕೆಯಡಿಯಲ್ಲಿ ದುರಸ್ತಿ ಪಡಿಸಲಾಗಿದೆ. ತೀವ್ರವಾಗಿ ಹದಗೆಟ್ಟಿರುವ 9 ರಸ್ತೆಗಳನ್ನು ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ, ತುಮಕೂರು ಇವರು ಒಟ್ಟು 10 ಲಕ್ಷ ರೂಗಳಿಗೆ " ಅತಿವೃಷ್ಟಿಯಿಂದ ಹಾನಿ" ಕಾರ್ಯಕ್ರಮದಡಿ ಅನುಮೋದಿಸಿರುತ್ತಾರೆ. ಮೋರಿ ಧಕ್ಕೆಗೊಂಡಿರುವ ಭಾಗಗಳಲ್ಲಿ ತಾತ್ಕಾಲಿಕ ತಿರುವುಗಳನ್ನು ನಿರ್ಮಿಸಲಾಗಿದ್ದು ಮೋರಿ ಸರಿಪಡಿಸಲು ಕ್ರಮ ಕೈಗೊಳ್ಳಲಾಗಿದೆ.

3. ಈ ಕಾಮಗಾರಿಗಳನ್ನು ಮುಂದಿನ ಮಾರು ತಿಂಗಳ ಒಳಗಾಗಿ ಪೂರ್ಣಗೊಳಿಸಿ ಸಂಚಾರಕ್ಕೆ ಅನುವುಮಾಡಲು ಕ್ರಮ ಕೈಗೊಳ್ಳಲಾಗುತ್ತದೆ.

ಚಿಂತಾಮಣಿ ನಗರದ ಯುನಾನಿ ಆಸ್ಪತ್ರೆಯ ದುರಸ್ಥಿ

694 (749) ಶ್ರೀ ಚೌಡರೆಡ್ಡಿ (ಚಿಂತಾಮಣಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಂತಾಮಣಿ ನಗರದ ಯುನಾನಿ ಆಸ್ಪತ್ರೆಯ ಕಟ್ಟಡ ಹಾಳಾಗಿ ರೋಗಿಗಳಿಗೆ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಯುನಾನಿ ಆಸ್ಪತ್ರೆಯ ಒಳರೋಗಿಗಳಿಗಾಗಿ ಇಲಾಖೆ 10 ಹಾಸಿಗೆಗಳನ್ನು ಒದಗಿಸಲು ಸಾಧ್ಯವೇ ಹಾಗಿದ್ದಲ್ಲಿ ಯಾವಾಗ ಒದಗಿಸಿ ಕೊಡಲಾಗುವುದು?